ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ, ಕುಂದಾಪುರ
ಸಿ.ಸಿ. ನಂಬ್ರ:1778/2023

ಚಾಸಾ:2 ಪ್ರಾಸಾ:1

ದಿನಾಂಕ: 21.08.2025

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ರಾಜೀವ |
| ತಂದೆಯ ಹೆಸರು | : | ಅಬು |
| ವಯಸ್ಸು | : | 62 ವರ್ಷ |
| ಉದ್ಯೋಗ | : | ಮನೆಯಲ್ಲಿ ಇರುವುದು |
| ವಾಸ ಸ್ಥಳ | : | ಕಿರಿಮಂಜೇಶ್ವರ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:**

ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ಚಾಸಾ-1 ರವರ ಬಳಿ ನಾನು ಕೆಲಸ ಮಾಡುತ್ತಿದ್ದೆ. ನನಗೆ ಬೇರೆ ಏನೂ ಗೊತ್ತಿಲ್ಲ. ಪೊಲೀಸರಿಗೆ ನಾನು ಯಾವುದೇ ಹೇಳಿಕೆಯನ್ನು ನೀಡಿಲ್ಲ. ಸಾಕ್ಷಿ ನ್ಯಾಯಾಲಯದ ಮುಂದೆ ಇರುವ ಕತ್ತಿ ಮತ್ತು ಬಿಳಿ ಶರ್ಟ್‌ನ್ನು ನೋಡಿ ಗುರುತಿಸಿಲ್ಲ. ಅವುಗಳನ್ನು ಮುಮಾ1 ಮತ್ತು 2 ಎಂದು ಗುರುತಿಸಲಾಯಿತು.

ಸಾಕ್ಷಿ ಪಂಚನಾಮೆಯಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಸದ್ರಿ ದಾಖಲೆಯನ್ನು ನಿಪಿ-1 ಎಂದು, ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ದವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**ಪಾಟೀ ಸವಾಲು: ಮಾನ್ಯ ಸ.ಸ.ಅ.ರವರಿಂದ:**

ದಿ: 05-08-1984 ರಂದು ಸಂಜೆ 6-30ರ ಸಮಯದಲ್ಲಿ ಗುಜ್ಜಾಡಿ ಗ್ರಾಮದ ಚಾಸಾ-1 ರವರಿಗೆ ಸೇರಿದ ಫ್ಯಾಕ್ಟರಿಯಲ್ಲಿ ಆರೋಪಿಯು ಚಾಸಾ-1 ರವರಿಗೆ ತಾನು ಫಿಶ್ ಪೌಡರ್ ಗಾಗಿ ಬೆಳೆ ಮಾಡಿದ್ದ ಜಾಗದಲ್ಲಿ ಆರೋಪಿಯು ಹಸು ಮೇಯಿಸುತ್ತಿದ್ದ ಕಾರಣ ಆತನನ್ನು ಪ್ರಶ್ನಿಸಿದಾಗ ಕೋಪಗೊಂಡು ಕೈಯಿಂದ ಹೊಡೆದು ಹಲ್ಲೆ ಮಾಡಿ ಕಾಲಿನಿಂದ ಒದ್ದು ಅನಂತರದಲ್ಲಿ ಅದೇ ರೀತಿ ತೊಂದರೆ ನೀಡಿದರೆ ಕೊಲೆ ಮಾಡುವುದಾಗಿ ಚಾಕು ತೋರಿಸಿ ಬೆದರಿಸಿರುತ್ತಾರೆ ಎಂದರೆ ನನಗೆ

ತಿಳಿದಿಲ್ಲ. ಅಲ್ಲದೇ ಚಾಸಾ-1 ರವರ ಫ್ಯಾಕ್ಟರಿಗೆ ಬೆಂಕಿ ಹಾಕುವುದಾಗಿ ಬೆದರಿಕೆ ಹಾಕಿರುತ್ತಾರೆ ಎಂದರೆ ನನಗೆ ತಿಳಿದಿಲ್ಲ.

ದಿಃ 06-08-1984 ರಂದು ಪೊಲೀಸರು ಘಟನಾ ಸ್ಥಳಕ್ಕೆ ಭೇಟಿ ನೀಡಿದ್ದು ಚಾಸಾ-1 ರವರು ಜಾಗ ತೋರಿಸಿದ್ದು ಆಗ ನಾನು ಮತ್ತು ಚಾಸಾ-3 ರವರು ಹಾಜರು ಇದ್ದು, ಪಂಚನಾಮೆಯನ್ನು ಮಧ್ಯಾಹ್ನ 2 ರಿಂದ 2-30ರವರೆಗೆ ಜರುಗಿಸಿ ನಿಪಿ-1ಕ್ಕೆ ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಆ ವೇಳೆಗೆ ನ್ಯಾಯಾಲಯದ ಮುಂದೆ ಇರುವ ಮುಮಾ1 ಮತ್ತು 2ನ್ನು ವಶಕ್ಕೆ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಅದೇ ದಿನ ಪೊಲೀಸರು ನನ್ನನ್ನು ವಿಚಾರಿಸಿ ಹೇಳಿಕೆ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಸದ್ರಿ ಹೇಳಿಕೆಯನ್ನು ನಿಪಿ-2 ಎಂದು ಗುರುತಿಸಲಾಯಿತು. ನಾನು ಮೇಲೆ ಅಪಾದಿಸಿದ ಕೃತ್ಯದ ಪ್ರತ್ಯಕ್ಷದರ್ಶಿಯಾಗಿದ್ದು ಪಂಚನಾಮೆಗೆ ಸಹಕರಿಸಿ ಪೊಲೀಸರಿಗೆ ಹೇಳಿಕೆ ನೀಡಿದ್ದರೂ ನನಗೆ ವಯಸ್ಸಾದ ಕಾರಣ ಮರೆವು ಇದ್ದು ಏನೂ ತಿಳಿದಿಲ್ಲ ಎಂದು ನುಡಿಯುತ್ತಿದ್ದೇನೆ ಎಂದರೆ ಸರಿ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

**ಮರು ವಿಚಾರಣೆಃ** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ . ದಂ. ಕುಂದಾಪುರ**